KARN010015282026

| | | |
|---|---|---|
| Presented on | : | 20-07-2026 |
| Registered on | : | 21-07-2026 |
| Decided on | : | 10-08-2026 |
| Duration | : | 21 days |

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.

**:ಉಪಸ್ಥಿತರು:**

ಶ್ರೀಯುತ ಎಂ.ಹೆಚ್. ಅಣ್ಣಯ್ಯನವರ, ಬಿಕಾಂ.ಎಲ್.ಎಲ್.ಬಿ. (ವಿಶೇಷ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.

M H ANNAYYANAVAR

Digitally signed by M H ANNAYYANAVAR
Date: 2026.08.11 16:17:20 +0530

ದಿನಾಂಕ **10** ನೇ ಆಗಸ್ಟ್ ಮಾಹೆ **2026**

ಕ್ರಿಮಿನಲ್ ಮಿಸಲೇನಿಯಸ್ ಸಂಖ್ಯೆ **548/2026**

ಅರ್ಜಿದಾರರು : **(ಆರೋಪಿ)**

ಶ್ರೀ ಭೂಪೇಂದರ್ ಕುಮಾರ್,
ಬಿನ್ ಸಂಜಯ್ ಚೌದರಿ,
ವಯಸ್ಸು 27 ವರ್ಷ.
ವಾಸ: ಬರಿಯಾ ದೀ ಗ್ರಾಮ,
ಪೂರ್ವ ಚಂಪಾರಣ್ ಜಿಲ್ಲೆ,
ಬಿಹಾರ ರಾಜ್ಯ.
**(ಪರವಾಗಿ ಶ್ರೀ ಕೆ. ವಿಜಯ್ ಕುಮಾರ್., ವಕೀಲರು)**

- ವಿರುದ್ಧ -

ಎದುರುದಾರರು:

ಸರ್ಕಾರದ ಪರವಾಗಿ ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣೆ.
ಬೆಂಗಳೂರು ದಕ್ಷಿಣ ಜಿಲ್ಲೆ.
**(ಪರವಾಗಿ ಸರ್ಕಾರಿ ಅಭಿಯೋಜಕರು)**

*****

## <u>ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ **483** ರಡಿ</u>
## <u>ಜಾಮೀನು ಅರ್ಜಿಯ ಮೇಲೆ ಆದೇಶ</u>

ಅರ್ಜಿದಾರರ ಪರ ವಕೀಲರು ಮಾನ್ಯ ನ್ಯಾಯಾಲಯದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ.483 ರ ಅಡಿಯಲ್ಲಿ ಜಾಮೀನು ಅರ್ಜಿಯನ್ನು ಸಲ್ಲಿಸಿ, ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣಾಧಿಕಾರಿಯವರು ಅರ್ಜಿದಾರರು ಯಾವುದೇ ರೀತಿಯ ಅಪರಾಧ ಮಾಡಿಲ್ಲದಿದ್ದರೂ ಸಹಿತ ಅರ್ಜಿದಾರರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದು, ಅರ್ಜಿದಾರರು ನ್ಯಾಯಾಲಯಕ್ಕೆ ಸೂಕ್ತ ಜಾಮೀನು ನೀಡಲು ತಯಾರಿದ್ದು ಹಾಗೂ ನ್ಯಾಯಾಲಯ ವಿಧಿಸುವ ಷರತ್ತುಗಳನ್ನು ಪಾಲಿಸಲು ತಯಾರಿರುತ್ತಾರೆಂದು, ಆದ್ದರಿಂದ ಅರ್ಜಿದಾರರು ಸಲ್ಲಿಸಿರುವ ಜಾಮೀನು ಅರ್ಜಿಯನ್ನು ಮಂಜೂರು ಮಾಡಬೇಕೆಂದು ವಿನಂತಿಸಿಕೊಂಡಿರುತ್ತಾರೆ.

2. ಸದರಿ ಅರ್ಜಿಗೆ ಸರ್ಕಾರಿ ಅಭಿಯೋಜಕರು ತಕರಾರು ಸಲ್ಲಿಸಿ, ಅರ್ಜಿದಾರರ ಮೇಲೆ ಇರತಕ್ಕಂತಹ ಆಪಾದನೆ ಜಾಮೀನು ರಹಿತವಾದಂತಹ ಆಪಾದನೆಯಾಗಿರುತ್ತದೆ. ಅರ್ಜಿದಾರರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿದಲ್ಲಿ ಪುನಃ ಇಂತಹದೇ ಕೃತ್ಯ ಎಸಗುವ ಸಾಧ್ಯತೆ ಇರುತ್ತದೆ ಹಾಗೂ ತನಿಖೆಗೆ ಸಹಕರಿಸದೇ ಸಾಕ್ಷ್ಯಾಧಾರಗಳನ್ನು ನಾಶಪಡಿಸುವ, ಸಾಕ್ಷಿದಾರರಿಗೆ ಬೆದರಿಸುವ ತನಿಖೆಗೆ ಅಡ್ಡಿಯುಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು, ಈ ಮೇಲ್ಕಂಡ ಕಾರಣಗಳಿಂದಾಗಿ ಜಾಮೀನು ಅರ್ಜಿಯನ್ನು ತಿರಸ್ಕರಿಸಬೇಕೆಂದು ಕೇಳಿಕೊಂಡಿದ್ದಾರೆ.

3. ಅರ್ಜಿ, ತಕರಾರು ಹಾಗೂ ಉಭಯ ವಕೀಲರ ವಾದ ವಿವಾದವನ್ನು ಪರಿಶೀಲಿಸಲಾಗಿ, ಮಾನ್ಯ ನ್ಯಾಯಾಲಯಕ್ಕೆ ಈ ಕೆಳಕಂಡ ಅಂಶಗಳು ಚರ್ಚೆಗೆ ಬಂದಿರುತ್ತವೆ:-

1. ಅರ್ಜಿದಾರರ ಪರ ವಕೀಲರು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ.483 ರಡಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಬಹುದೇ ?
2. ಯಾವ ಆದೇಶ ?

4. ಮೇಲ್ಕಂಡ ಅಂಶಗಳಿಗೆ ನನ್ನ ಉತ್ತರ ಈ ಕೆಳಕಂಡಂತೆ ಇರುತ್ತದೆ.

ಅಂಶ ನಂ.1 : ಸಕಾರಾತ್ಮಕವಾಗಿ

ಅಂಶ ನಂ.2 : ಅಂತಿಮ ಆದೇಶದಂತೆ ಈ ಕೆಳಕಂಡ ಕಾರಣಗಳಿಗಾಗಿ:

## ಕಾರಣಗಳು

5. ಅಂಶ ಸಂಖ್ಯೆ 1: ಪಿರ್ಯಾದುದಾರರು ಕೊಟ್ಟ ದೂರಿನಂತೆ ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣಾಧಿಕಾರಿಗಳು ಅರ್ಜಿದಾರರ ವಿರುದ್ಧ ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣಾ ಅಪರಾಧ ಸಂಖ್ಯೆ 25/2026 ಎನ್.ಡಿ.ಪಿ.ಎಸ್. ಕಾನೂನು ಕಾಯಿದೆ, 1985 ಕಲಂ.8(ಸಿ) ಮತ್ತು 20(ಬಿ)(ii)B ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿರುತ್ತಾರೆ.

6. ಪ್ರಕರಣದ ಸಂಕ್ಷಿಪ್ತ ಸಾರಾಂಶ: ದೂರನ್ನು ಪರಿಶೀಲಿಸಲಾಗಿ, ದೂರುದಾರರಿಗೆ ದಿನಾಂಕ 13.04.2026 ರಂದು ಮಧ್ಯಾಹ್ನ 2.20 ಗಂಟೆಗೆ ಮಾಹಿತಿ ಬಂದ ಮೇರೆಗೆ ಮಾಹಿತಿಯನ್ನು ಟಿಪ್ಪಣಿ ಮಾಡಿಕೊಂಡು ಅಗತ್ಯ ಕ್ರಮಗಳನ್ನು ಕೈಗೊಂಡು ಅನುಮತಿಯ ಮೇರೆಗೆ ಪಂಚರು ಮತ್ತು ಸಿಬ್ಬಂದಿಗಳೊಂದಿಗೆ ಚನ್ನಪಟ್ಟಣ ಟೌನ್,

ಹನುಮಂತನಗರದಲ್ಲಿರುವ ಇ-ಲ್ಯಾಂಡ್ ಅಪ್ಪಿರಲ್ಸ್ ಗಾರ್ಮೆಂಟ್ಸ್ ಹಿಂಭಾಗ ಇರುವ ಬಿಸ್ಮಿಲ್ಲಾ ನಗರದ ಖಾಲಿ ನಿವೇಶನಗಳ ಬಳಿ ದಾಳಿ ಮಾಡಿದಾಗ 1 ನೇ ಆರೋಪಿಯು/ಅರ್ಜಿದಾರರು ಒಂದು ಪ್ಲಾಸ್ಟಿಕ್ ಚೀಲದೊಳಗೆ ಗಾಂಜಾ ಸೊಪ್ಪನ್ನು ಹೆಚ್ಚಿನ ಹಣ ಸಂಪಾದನೆಗಾಗಿ ದಾರಿಹೋಕರಿಗೆ ಮಾರಾಟ ಮಾಡಲು ಪ್ರಯತ್ನಿಸುತ್ತಿದ್ದು, ಸದರಿ ಗಾಂಜಾ 3.260 ಕೆ.ಜಿ. ತೂಕವಿದ್ದು, ಅದನ್ನು ವಶಪಡಿಸಿಕೊಂಡಿರುತ್ತಾರೆ. ನಂತರ ಎದುರದಾರ ಪೊಲೀಸರು ಅರ್ಜಿದಾರರ ವಿರುದ್ಧ ಪ್ರಕರಣ ದಾಖಲು ಮಾಡಿರುತ್ತಾರೆ.

7. ಅರ್ಜಿದಾರ ಮೇಲೆ ಇರುವಂತ ಆಪಾದನೆ ಎನ್.ಡಿ.ಪಿ.ಎಸ್. ಕಾನೂನು ಕಲಂ.8(ಸಿ) ಮತ್ತು 20(ಬಿ)(ii)B ಜಾಮೀನು ರಹಿತವಾದ್ದಂತಹ ಆಪಾದನೆ ಆಗಿದ್ದು, ಮಾನ್ಯ ಜಿಲ್ಲಾ ನ್ಯಾಯಾಲಯದಲ್ಲಿ ನಡೆಯತಕ್ಕ ಪ್ರಕರಣಗಳು ಆಗಿರುತ್ತದೆ.

8. ದೋಷಾರೋಪಣಾ ಪಟ್ಟಿ ಪರಿಶೀಲಿಸಲಾಗಿ, ಎದರುದಾರ ಪೊಲೀಸರು ಸದರಿ ಪ್ರಕರಣದಲ್ಲಿ ಸ್ಥಳ ಮತ್ತು ಅಮಾನತ್ತು ಮಹಜರ್ ಮಾಡಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದು, ಮಾನ್ಯ ನ್ಯಾಯಾಲಯದಲ್ಲಿ ವಿಶೇಷ ಪ್ರಕರಣ ಸಂಖ್ಯೆ 93/2026 ದಾಖಲಾಗಿದ್ದು, ಅರ್ಜಿದಾರರು ದಿನಾಂಕ 13.04.2026 ರಂದು ನ್ಯಾಯಾಂಗ ಬಂಧನದಲ್ಲಿದ್ದು, ಮುಂದುವರೆದ ತನಿಖೆಗೆ ಅರ್ಜಿದಾರರು ಅವಶ್ಯಕತೆ ಇರುವುದಿಲ್ಲ. ಈ ಮೊದಲು ಅರ್ಜಿದಾರರ ವಿರುದ್ಧ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ. ಅರ್ಜಿದಾರರು ಯುವಕನಾಗಿದ್ದು, ಆತನ ಮೇಲೆ ಅವಲಂಬಿತವಾದ ಕುಟುಂಬ

ಇರುವುದರಿಂದ, ಇಂಥ ಸಂದರ್ಭದಲ್ಲಿ ಅರ್ಜಿದಾರರು ಜಾಮೀನು ಪಡೆಯಲು ಅರ್ಹರಿರುತ್ತಾರೆ.

9. ಅರ್ಜಿದಾರರು ಬಿಹಾರ ರಹವಾಸಿಯಾಗಿದ್ದು, ಚರ ಮತ್ತು ಸ್ಥಿರ ಆಸ್ತಿಗಳನ್ನು ಹೊಂದಿದ್ದು, ಮಾನ್ಯ ನ್ಯಾಯಾಲಯಕ್ಕೆ ಸೂಕ್ತವಾದ ಜಾಮೀನು ನೀಡುವುದಾಗಿ ತಿಳಿಸಿದ್ದು, ಇಂತಹ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಅರ್ಜಿದಾರರಿಗೆ ಷರತ್ತಿನ ಆಧಾರದ ಮೇಲೆ ಜಾಮೀನನ್ನು ಮಂಜೂರು ಮಾಡುವುದು ಸೂಕ್ತ ಅಂತ ನ್ಯಾಯಾಲಯಕ್ಕೆ ಕಂಡು ಬಂದಿರುವುದರಿಂದ ಸದರಿ ಅಂಶ ಸಂಖ್ಯೆ ***1*** ನ್ನು ಸಕಾರಾತ್ಮಕವಾಗಿ ಉತ್ತರಿಸಲಾಯಿತು.

10. <u>ಅಂಶ ಸಂಖ್ಯೆ **2**</u>**:** ಅಂಶ ಸಂಖ್ಯೆ 1 ಕ್ಕೆ ನೀಡಿದ ಕಾರಣ ಹಾಗೂ ಉತ್ತರಗಳಿಗಾಗಿ ಈ ಕೆಳಕಂಡಂತೆ ಆದೇಶ:

## <u>ಆದೇಶ</u>

ಅರ್ಜಿದಾರ ಪರ ವಕೀಲರು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ.483 ರ ಅಡಿಯಲ್ಲಿ ಸಲ್ಲಿಸಿದ ಜಾಮೀನು ಅರ್ಜಿಯನ್ನು ಪುರಸ್ಕರಿಸಲಾಯಿತು.

ಅರ್ಜಿದಾರರು ಸಂಬಂಧಪಟ್ಟ ನ್ಯಾಯಾಲಯಕ್ಕೆ/ ದಂಡಾಧಿಕಾರಿಗಳ ನ್ಯಾಯಾಲಯಕ್ಕೆ ರೂ.50,000/- (ಐವತ್ತು ಸಾವಿರ ರೂಪಾಯಿ) ಸ್ವಮುಚ್ಚಳಿಕೆ ಪತ್ರ ಹಾಗೂ ಅಷ್ಟೇ ಮೊತ್ತದ <u>ಒಬ್ಬ ಸ್ಥಳೀಯ ಸೂಕ್ತ ಜಾಮೀನನ್ನು</u> ನೀಡತಕ್ಕದ್ದು ಹಾಗೂ ಅರ್ಜಿದಾರ ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು.

<u>ಷರತ್ತುಗಳು</u>

1. ಅರ್ಜಿದಾರ ತಮ್ಮ ವಿಳಾಸಕ್ಕೆ ಸಂಬಂಧಪಟ್ಟಂತೆ ಚುನಾವಣಾ ಗುರುತಿನ ಚೀಟಿ/ಆಧಾರ್ ಕಾರ್ಡ್ ಹಾಗೂ ಇತರೆ ದಾಖಲೆಯನ್ನು ಹಾಜರುಪಡಿಸತಕ್ಕದ್ದು.
2. ಅರ್ಜಿದಾರ ಅಭಿಯೋಜಕ ಪಕ್ಷದ ಸಾಕ್ಷಿಗಳನ್ನು ಯಾವುದೇ ರೀತಿಯಿಂದಲೂ ಹೆದರಿಸತಕ್ಕದ್ದಲ್ಲ.
3. ಅರ್ಜಿದಾರ ನ್ಯಾಯಾಲಯಕ್ಕೆ ತಪ್ಪದೇ ಎಲ್ಲಾ ವಿಚಾರಣೆ ದಿನಾಂಕದಂದು ಹಾಜರಿರತಕ್ಕದ್ದು.
4. ಅರ್ಜಿದಾರ ಪುನಃ ಇಂತಹ ಪ್ರಕರಣಗಳಲ್ಲಿ ಭಾಗಿಯಾಗತಕ್ಕದ್ದಲ್ಲ.
5. ಈ ಮೇಲ್ಕಂಡ ಷರತ್ತುಗಳನ್ನು ಪೂರೈಸಿದ ನಂತರ ಅರ್ಜಿದಾರರ ಬಿಡುಗಡೆ ಮಾಡಲು ಸಂಬಂಧಪಟ್ಟಂತಹ ಬಂಧೀಖಾನೆ ಅಧೀಕ್ಷಕರಿಗೆ ಮಾಹಿತಿ ಕಳಿಸಲು ಆದೇಶಿಸಲಾಯಿತು.

ಈ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘನೆ ಮಾಡಿದಲ್ಲಿ ತಕ್ಷಣವೇ ಅರ್ಜಿದಾರರ ಜಾಮೀನು ವಜಾ ಆಗತಕ್ಕದ್ದು ಅಂತ ಆದೇಶ ಮಾಡಲಾಯಿತು.

*(ಈ ಆದೇಶದ ಉಕ್ತಲೇಖನವನ್ನು ಶೀಘ್ರಲಿಪಿಗಾರ್ತಿ ಗ್ರೇಡ್ III ರವರಿಗೆ ನೇರವಾಗಿ ಗಣಕಯಂತ್ರ ಪರದೆಯ ಮೇಲೆ ನೀಡಿದ್ದು, ನಂತರ ಅವರು ಗಣಕೀಕರಿಸಿದ್ದನ್ನು ಓದಿ, ತಿದ್ದಿ ಇದೇ ದಿನಾಂಕ 10 ನೇ ಆಗಸ್ಟ್ ಮಾಹೆ* ***2026*** *ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

(ಎಂ.ಹೆಚ್.ಅಣ್ಣಯ್ಯನವರ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಮನಗರ.

*****